| |
|---|
| **Deposition Sheets (RP.No.57) Form No.4** |

**IN THE COURT OF ADDL. CIVIL JUDGE & J.M.F.C., KARKALA.**

**Criminal Case No. 274/2022**

ಪಿಡ್ಬ್ಲೂಃ 7 ಸಿಡ್ಲ್ಯೂಃ 11

ಸಾಕ್ಷಿದಾರನ ಹೆಸರು : ಅಬ್ದುಲ್ ಶುಕ್ರು
ತಂದೆಯ ಹೆಸರು : ನಿಜಾಮುದ್ದಿನ್
ಪ್ರಾಯ : 47 ವರ್ಷ
ಉದ್ಯೋಗ : ವ್ಯಾಪಾರ
ವಾಸ : ತೆಳ್ಳಾರು

ದಿನಾಂಕ 03.10.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-</u>

ಪೊಲೀಸರು ನನ್ನನ್ನು ಮಹಜರಿಗೆ ಕರೆದಿರುವುದಿಲ್ಲ. ನನ್ನ ಸಮಕ್ಷಮ ಯಾವುದೆ ಮಹಜರು ಮಾಡಿರುವುದಿಲ್ಲ. ದಾಖಲೆಗೆ ಸಹಿ ಪಡೆದುಕೊಂಡಿರುತ್ತಾರೆ. ಯಾವ ವಿಚಾರಕ್ಕೆ ಎಂದು ಗೊತ್ತಿಲ್ಲ, ಏನು ಬರೆದಿದೆ ಎಂದುಗೊತ್ತಿಲ್ಲ. ಈಗ ನೋಡಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಸದ್ರಿದಾಖಲೆ ಮಹಜರು ಆಗಿದ್ದು ಅದನ್ನು ಈಗಾಗಲೇನಿಪಿ-9 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು. ನಿಪಿ-10 ಭಾವಚಿತ್ರವನ್ನು ಯಾಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ</u> <u>ಸಹಾಯಕ ಸರ್ಕಾರಿ ಅಭಿಯೋಜಕರುಃ-</u>

2. ದಿಃ03.02.2021 ರಂದು ಕಾರ್ಕಳ ತಾಲೂಕು ದುರ್ಗಾ ಗ್ರಾಮದ ತೆಳ್ಳಾರು ಆಸಿಯ ಮಂಜಿಲ್ ಎಂಬಲ್ಲಿ ನನ್ನ ಹಾಗೂ ಚಾಸಾ-12 ರವರ ಸಮಕ್ಷಮ ಪೊಲೀಸರು ನ್ಯಾಯಾಲಯದ ಆದೇಶದಂತೆ ಸ್ವಾ ಧೀನಪಡಿಸಿಕೊಂಡ ದನದ ಮಾಂಸವನ್ನು ವಿಲೇವಾರಿ ಮಾಡುವ ಸಮಯದಲ್ಲಿ ತಯಾರಿಸಿದ ಮಹಜರಿಗೆ ಸ್ಥಳದಲ್ಲಿಯೇ ನನ್ನ ಹಾಗೂ ಚಾಸಾ-12 ರವರ ಸಹಿ ಪಡೆದುಕೊಂಡಿದರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಭಾವಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು :</u> ಆರೋಪಿ ಪರ : ಶ್ರೀ ಎ ಎಸ್ ಎಂ ವಕೀಲರಿಂದಃ ಏನು ಇಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ